**ಕರ್ನಾಟಕ ಸರ್ಕಾರ**
**ಅರಣ್ಯ ಇಲಾಖೆ**
**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು) ಹಾಗೂ ಆಯ್ಕೆ ಪ್ರಾಧಿಕಾರ**
**ಇವರ ಕಚೇರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು-560003**

## ಪ್ರಕಟಣೆ

**ಅಧಿಸೂಚನೆ ಸಂಖ್ಯೆ: ಬಿ9-ನೇಮಕಾತಿ-ವಿವ-1/2019-20 ದಿನಾಂಕ: 02-03-2020**
**339 ಅರಣ್ಯ ರಕ್ಷಕ ಹುದ್ದೆಗಳಿಗೆ ನೇರ ನೇಮಕಾತಿ**

ಈ ಕಛೇರಿಯ ದಿನಾಂಕ: 17.08.2021ರ ಪ್ರಕಟಣೆಯನ್ನು ಮುಂದುವರೆಸುತ್ತಾ, ಸದರಿ ಪ್ರಕಟಣೆ ಮೂಲಕ 339 ಅರಣ್ಯ ರಕ್ಷಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಂಬಂಧ ದೇಹದಾರ್ಢ್ಯತೆ, ದೈಹಿಕ ತಾಳ್ವಿಕೆ ಹಾಗೂ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗೆ ಮೆರಿಟ್ ಹಾಗೂ ರೋಸ್ಟರ್ ಬಿಂದುಗಳ ಅನುಸಾರ ಅರ್ಹತೆ ಪಡೆದ ಅಭ್ಯರ್ಥಿಗಳ ವೃತ್ತವಾರು 1:20 (ಹುದ್ದೆ : ಅಭ್ಯರ್ಥಿ) ಅಂತಿಮ ಅರ್ಹತಾ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.

1:20 (ಹುದ್ದೆ : ಅಭ್ಯರ್ಥಿ) ಅಂತಿಮ ಅರ್ಹತಾ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ದೈಹಿಕ ಪರೀಕ್ಷೆಗಳನ್ನು ದಿನಾಂಕ: 27.09.2021 ರಿಂದ 01.10.2021 ರವರೆಗೆ ಆಯಾ ವೃತ್ತಗಳ ವ್ಯಾಪ್ತಿಯಲ್ಲಿ ನಡೆಸಲು ಸಂಭಾವ್ಯ ವೇಳಾ ಪಟ್ಟಿಯನ್ನು ನಿಗಧಿಪಡಿಸಲಾಗಿರುತ್ತದೆ. ದೈಹಿಕ ಪರೀಕ್ಷೆಗೆ ಅರ್ಹರಾಗಿರುವ ಅಭ್ಯರ್ಥಿಗಳಿಗೆ ದಿನಾಂಕ ಹಾಗೂ ದೈಹಿಕ ಪರೀಕ್ಷಾ ಕೇಂದ್ರದ ವಿವರಗಳನ್ನೊಳಗೊಂಡ ಪ್ರವೇಶ ಪತ್ರವನ್ನು ಮುಂದಿನ ಹಂತದಲ್ಲಿ ಇಲಾಖಾ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲಾಗುವುದು.

23/8/21

ಸ್ಥಳ: ಬೆಂಗಳೂರು
ದಿನಾಂಕ: 23.08.2021

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯ ಪಡೆ ಮುಖ್ಯಸ್ಥರು)
ಹಾಗೂ ಆಯ್ಕೆ ಪ್ರಾಧಿಕಾರ